# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ 166 ಕರೀಸಂದ್ರ ವಾರ್ಡ್ ಕಛೇರಿ ಬೆಂಗಳೂರು

**ದಿನಾಂಕ: 20.08.2022 ರಂದು ಬೆಳಗ್ಗೆ 11:00 ಗಂಟೆಗೆ ವಾರ್ಡ್ ಸಂಖ್ಯೆ 166 ಕರೀಸಂದ್ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ. ಪ್ರದೀಪ್ ರಾಥೋಡ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಪ್ರಕಾಶ್. ಎನ್. ಎಸ್ – ಸಹಾಯಕ ಅಭಿಯಂತರರು (ವಾರ್ಡ್ 166 ಕರೀಸಂದ್ರ)
3. ಶ್ರೀ. ನವೀನ್ ಕುಮಾರ್. ಎಸ್ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ಕಿಯೋನಿಕ್ಸ್) (ವಾರ್ಡ್ 166 ಕರೀಸಂದ್ರ)
4. ಶ್ರೀ. ಕಲ್ಯಾಣ್ – ಕಿ.ಆ.ಪ (ಹೊರಗುತ್ತಿಗೆ ಆಧಾರದ ಮೇಲೆ) ವಾರ್ಡ್ 166 ಕರೀಸಂದ್ರ)
5. ಶ್ರೀ. ದಿನೇಶ್ – ಕಂದಾಯ ಪರಿವೀಕ್ಷಕರು – (ವಾರ್ಡ್ 166 ಕರೀಸಂದ್ರ)
6. ಘನತ್ಯಾಜ್ಯ ವಿಲೇವಾರಿ ಸೂಪರ್‌ವೈಸರ್‌ಗಳು – (ವಾರ್ಡ್ 166 ಕರೀಸಂದ್ರ)
7. 7ನೇ ಬ್ಲಾಕ್ ಜಯನಗರ ಮತ್ತು ಬನಶಂಕರಿ 2ನೇ ಹಂತದ ನಿವಾಸಿಗಳ ಸಂಘ ಸಂಸ್ಥೆಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು.

*********

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 166 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ಕಾರ್ಯಗತಗೊಳ್ಳದ ಕೆಲಸಕಾರ್ಯಗಳನ್ನು ಅಧಿಕಾರಿಗಳು ನಿಗಧಿತ ಅವಧಿಯೊಳಗೆ ಕಡ್ಡಾಯವಾಗಿ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿ ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಗಂಭೀರವಾಗಿ ಪರಿಗಣಿಸುವಂತೆ ಸೂಚಿಸಲಾಯತು.

ಮುಂದುವರೆದು, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. **ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಟ್ರಾಫಿಕ್ ಪೋಲೀಸ್ ಇಲಾಖೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ.**

- ವಾರ್ಡ್ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗಗಳ ಮೇಲೆ ಸಣ್ಣ ಪುಟ್ಟ ಅಂಗಡಿಗಳಿದ್ದು ವಾಹನ ನಿಲುಗಡೆಯಿಂದಾಗಿ ಹಾಗೂ ವಾರಸುದಾರರಿಲ್ಲದ ವಾಹನಗಳು ಪಾದಚಾರಿ ಮಾರ್ಗದ ಮೇಲೆ ನಿಂತಿದ್ದು ಸಾರ್ವಜನಿಕರಿಗೆ ಪಾದಚಾರಿ ಮಾರ್ಗದಲ್ಲಿ ಓಡಾಡಲು ತೊಂದರೆಯುಂಟಾಗಿರುತ್ತದೆ. ಹಾಗೂ ವಾಹನ ಸಂಚಾರ ಅಡ್ಡಿಪಡಿಸಿರುವುದಾಗಿ ಸಾರ್ವಜನಿಕರು ತಿಳಿಸಿದರು.

**ಪು.ತಿ.ನೋ**

- ಬೆಂಗಳೂರು ಇಂಟರ್‌ನ್ಯಾಷನಲ್ ಶಾಲೆ ಹತ್ತಿರ ಟ್ರಾಫಿಕ್ ಜಾಮ್ ಉಂಟಾಗುತ್ತಿರುತ್ತದೆ. ಅದನ್ನು ಕಡಿಮೆ ಮಾಡುವಂತೆ ಸಾರ್ವಜನಿಕರು ತಿಳಿಸಿದರು.

**ಕ್ರಮ: ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಟ್ರಾಫಿಕ್ ಪೋಲೀಸ್ / ಆರೋಗ್ಯಾಧಿಕಾರಿಗಳು (ಪದ್ಮನಾಭನಗರ) / ಸ.ಅ ವಾ–166/ಸ.ಕಾ.ನಿ.ಅ (ಬನಶಂಕರಿ), ಕಾ.ಪಾ.ಅ/ಸ.ಕಾ.ನಿ.ಅ(ವಿದ್ಯುತ್–ದಕ್ಷಿಣ) ಬಿಬಿಎಂಪಿ**

**2. ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ.**

ಹಿಂದಿನ ಸಭೆಗಳಲ್ಲಿ ಸಾರ್ವಜನಿಕರು 6ನೇ ಅಡ್ಡರಸ್ತೆ ಮತ್ತು 11ನೇ ಅಡ್ಡರಸ್ತೆ, ಜಯನಗರ 7ನೇ ಬ್ಲಾಕ್‌ನಲ್ಲಿ ಯುಜಿಡಿ ಕಾಮಗಾರಿಯನ್ನು ಕೈಗೊಳ್ಳುವಂತೆ ಕೋರಿರುತ್ತಾರೆ. ಅದರಂತೆ ಸದರಿ ರಸ್ತೆಗಳಲ್ಲಿ ಕಾಮಗಾರಿಗಳನ್ನು ಚಾಲನೆ ಮಾಡಲಾಗಿರುತ್ತದೆ ಎಂದು ಸಾರ್ವಜನಿಕರಿಗೆ ತಿಳಿಸಿರುತ್ತಾರೆ.

**ಕ್ರಮ: ಸ.ಅ & ಸ.ಕಾ.ನಿ.ಅ (ಬಿಡಬ್ಲ್ಯೂಎಸ್‌ಎಸ್‌ಬಿ)**

**3. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.**

- ವಾರ್ಡ್ ವ್ಯಾಪ್ತಿಯಲ್ಲಿ ಸಿಲ್ಟ್ ಅಂಡ್ ಟ್ರಾಕ್ಟರ್‌ಗಳು ಕಾರ್ಯನಿರ್ವಹಿಸಿರುವ ಬಗ್ಗೆ ಮಾಹಿತಿಯನ್ನು ಕೇಳಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಸ್ವಚ್ಚತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

**ಕ್ರಮ: ಸ.ಕಾ.ನಿ.ಅ (ಘನತ್ಯಾಜ್ಯ) ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು**

**4. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.**

- ವಾರ್ಡ್ ವ್ಯಾಪ್ತಿಯ ಜಯನಗರ 7ನೇ ಬ್ಲಾಕ್‌ನಲ್ಲಿರುವ ಕನಕಪುರ ಮುಖ್ಯರಸ್ತೆ, 27ನೇ ಅಡ್ಡರಸ್ತೆ, 32ನೇ ಅಡ್ಡರಸ್ತೆ ಮತ್ತು 2ನೇ ಮುಖ್ಯರಸ್ತೆಯಲ್ಲಿ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ ಎಂದು ಸಾರ್ವಜನಿಕರು ದೂರು ನೀಡಿದರು.

**ಕ್ರಮ: ಸ.ಅ ಮತ್ತು ಅ.ಕಾ.ನಿ.ಅ (ವಿದ್ಯುತ್)**

- ವಾರ್ಡ್ ವ್ಯಾಪ್ತಿಯ ಕನಕಪುರ ಮುಖ್ಯರಸ್ತೆ ಹಾಗೂ ಕೆ.ಆರ್ ರಸ್ತೆಯಲ್ಲಿ ರಸ್ತೆಗುಂಡಿಗಳು ಹಾಗೂ ಇತರೆ ಸಮಸ್ಯೆಗಳನ್ನು ಖುದ್ದು ಹಾಜರಾಗಿ ಬಗೆಹರಿಸಬೇಕೆಂದು ಸಾರ್ವಜನಿಕರು ವಿನಂತಿಸಿದರು.

**ಕ್ರಮ: ಕೇಂದ್ರ ಯೋಜನೆ ವಿಭಾಗ**

**5. ಇನ್ನಿತರೆ ವಿಷಯಗಳು ಅಧ್ಯಕ್ಷರ ಸೂಚನೆಯಂತೆ.**

- ವಾರ್ಡ್ ವ್ಯಾಪ್ತಿಯ ಜಯನಗರ 7ನೇ ಬ್ಲಾಕ್‌ನ 2ನೇ ಮುಖ್ಯರಸ್ತೆ ಬೆಂಗಳೂರು ಇಂಟರ್‌ನ್ಯಾಷನಲ್ ಶಾಲೆ ಹತ್ತಿರ ಮರವನ್ನು ಕಡಿದುಹಾಕಿ ಅಲ್ಲಿಯೇ ಬಿಟ್ಟಿರುತ್ತಾರೆ. ಸದರಿ ಮರದ ರೆಂಬೆಕೊಂಬೆಗಳನ್ನು ಕೂಡಲೇ ತೆರವುಗೊಳಿಸಿಕೊಡಬೇಕೆಂದು ಸಾರ್ವಜನಿಕರು ಕೋರಿದರು.

**ಕ್ರಮ: ಅರಣ್ಯ ಅಧಿಕಾರಿ (ದಕ್ಷಿಣ–ಬಿಬಿಎಂಪಿ)**

**ಪು.ತಿ.ನೋ**

- ವಾರ್ಡ್ ವ್ಯಾಪ್ತಿಯ ಜಯನಗರ 7ನೇ ಬ್ಲಾಕ್‌ನ 32ನೇ ಅಡ್ಡರಸ್ತೆ ಮತ್ತು 4ನೇ ಅಡ್ಡರಸ್ತೆಗಳಲ್ಲಿ ಬೀದಿ ನಾಯಿಗಳ ಹಾವಳಿ ಜಾಸ್ತಿಯಾಗಿರುತ್ತದೆ. ಸದರಿ ಬೀದಿ ನಾಯಿಗಳನ್ನು ಹಿಡಿದು ಸಾರ್ವಜನಿಕರ ಮುಕ್ತ ಓಡಾಟಕ್ಕೆ ಅನುವುಮಾಡಿಕೊಡಬೇಕೆಂದು ಕೋರಿದರು.

**ಕ್ರಮ: ಜಂಟಿ ನಿರ್ದೇಶಕರು (ಪಶುಪಾಲನಾ)**

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಪ್ರದೀಪ್ ರಾಥೋಡ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು
ವಾರ್ಡ್ ಸಂಖ್ಯೆ 166

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 166